# ಶಾಲಾ ಆಡಳಿತ ಮಂಡಳಿಗಳ ಬೇಡಿಕೆ ಈಡೇರಿಸಿ

## ವಿಪ ಸಭಾಪತಿ ಬಸವರಾಜ ಹೊರಟ್ಟಿಗೆ ತಾಲೂಕು ಅನುದಾನರಹಿತ ಶಾಲಾ ಆಡಳಿತ ಮಂಡಳಿಗಳ ಒಕ್ಕೂಟದಿಂದ ಮನವಿ



ಕಲ್ಯಾಣ ಕರ್ನಾಟಕ ಶಾಲಾ ಆಡಳಿತ ಮಂಡಳಿಗಳ ವಿವಿಧ ಬೇಡಿಕೆಗಳ ಈಡೇರಿಸುವಂತೆ ಆಗ್ರಹಿಸಿ ಕೊಪ್ಪಳದಲ್ಲಿ ಕುಸ್ಮಾ ವತಿಯಿಂದ ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರಿಗೆ ಮನವಿ ಸಲ್ಲಿಸಿದರು.

• **ಕನ್ನಡಪ್ರಭ ವಾರ್ತೆ** ಕೊಪ್ಪಳ

ಕಲ್ಯಾಣ ಕರ್ನಾಟಕ ಶಾಲಾ ಆಡಳಿತ ಮಂಡಳಿಗಳ ವಿವಿಧ ಬೇಡಿಕೆಗಳ ಈಡೇರಿಸುವಂತೆ ಆಗ್ರಹಿಸಿ ಕೊಪ್ಪಳ ತಾಲೂಕು ಅನುದಾನರಹಿತ ಶಾಲಾ ಆಡಳಿತ ಮಂಡಳಿಗಳ ಒಕ್ಕೂಟ (ಕುಸ್ಮಾ) ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರಿಗೆ ಭಾನುವಾರ ಮನವಿ ಸಲ್ಲಿಸಿತು.

ಭಾನುವಾರದಂದು ನಗರದ ಜೆಡಿಎಸ್ ನಿಯೋಜಿತ ಅಭ್ಯರ್ಥಿ ವೀರೇಶ ಮಹಾಂತಯ್ಯನಮಠ ನಿವಾಸಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಮನವಿ ಸಲ್ಲಿಸಿದರು.

ಸಂಘಟನೆಯು ವಿವಿಧ ಬೇಡಿಕೆಗಳಿಗಾಗಿ ನಿರಂತರ ಹೋರಾಟ ಮಾಡುತ್ತ ಬಂದಿದೆ. ಈಗ ಖಾಸಗಿ ಶಿಕ್ಷಣ ಸಂಸ್ಥೆಗಳು ಕೋವಿಡ್‌ನಿಂದಾಗಿ ಸಾಕಷ್ಟು ಸಂಕಷ್ಟಕ್ಕೆ ಗೊಳಗಾಗಿವೆ. ಇದನ್ನು ಸಾಕಷ್ಟು ಬಾರಿ ಸರ್ಕಾರದ ಗಮನಕ್ಕೆ ತಂದರೂ ಸರ್ಕಾರ ಖಾಸಗಿ ಶಿಕ್ಷಣ ಸಂಸ್ಥೆಗಳ ಸಮಸ್ಯೆಗಳನ್ನು ಪರಿಹರಿಸುವ ಬದಲು ಇನ್ನಷ್ಟು ಕಠಿಣ ನಿಯಮಗಳನ್ನು ಜಾರಿಗೆ ತರುವುದರ ಮುಖಾಂತರ ಶಾಲೆಗಳನ್ನು ಮುಚ್ಚುವ ಪರಿಸ್ಥಿತಿಗೆ ತಂದಿದ್ದಾರೆ. ಈ ಮನವಿ ಮೂಲಕ ನಿಮ್ಮ ಧ್ವನಿಯು ಶಾಲಾ ಮತ್ತು ಶಿಕ್ಷಕರ ಅಭಿವೃದ್ಧಿಯ ಪರವಾಗಿರಲಿ.

ವಿವಿಧ ಬೇಡಿಕೆಗಳು 1995ರ ನಂತರದ ಕನ್ನಡ ಮಾಧ್ಯಮ, ಉರ್ದು, ಮರಾಠಿ, ತೆಲುಗು ಮತ್ತು ಇತರೆ ಪ್ರಾದೇಶಿಕ ಮಾತೃಭಾಷಾ ಶಿಕ್ಷಣ ಸಂಸ್ಥೆಗಳಿಗೆ ಅನುದಾನಕ್ಕೊಳಪಡಿಸುವ ಮೂಲಕ 25 ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಶಿಕ್ಷಕರನ್ನು ರಕ್ಷಿಸಬೇಕು.

ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿ ಹಾಗೂ ಕಲ್ಯಾಣ ಕರ್ನಾಟಕ ಮಾನವ ಸಂಪನ್ಮೂಲ, ಕೃಷಿ ಹಾಗೂ ಶೈಕ್ಷಣಿಕ ಅಭಿವೃದ್ಧಿ ಟ್ರಸ್ಟ್ ಕಲಬುರಗಿಯಿಂದ ಈ ಭಾಗದ ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಅನುದಾನಕ್ಕೊಳಪಡಿಸಬೇಕು ಮತ್ತು ಸಹಾಯ ಧನವನ್ನು ನೀಡಬೇಕು. ಶಾಲೆಗಳ ನವೀಕರಣ ಅಧಿಕಾರವನ್ನು ಈ ಮೊದಲಿನಂತೆ ಬಿಇಒಗಳಿಗೆ ನೀಡಬೇಕು ಮತ್ತು ಅನಗತ್ಯ ದಾಖಲೆಗಳಿಗಾಗಿ ಶಾಲೆಗಳಿಗೆ ಕಿರುಕುಳ ನೀಡುವುದನ್ನು ನಿಲ್ಲಿಸಬೇಕು, ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಮುಕ್ತವಾಗಿ ಸಾರ್ವಜನಿಕ ವಲಯದಲ್ಲಿ, ಅನೇಕ ಶಿಕ್ಷಣ ತಜ್ಞರೊಂದಿಗೆ, ಖಾಸಗಿ ಶಿಕ್ಷಣ ಸಂಸ್ಥೆಗಳ ಆಡಳಿತ ಮಂಡಳಿಗಳ ಸಂಘಗಳೊಂದಿಗೆ ಅದರ ಸಾಧಕ- ಬಾಧಕಗಳ ಬಗ್ಗೆ ಚರ್ಚಿಸದೇ ಜಾರಿಗೆ ತರಬಾರದು ಸೇರಿದಂತೆ ಇತರ ವಿಷಯಗಳ ಕುರಿತು ಸರ್ಕಾರದ ಗಮನಕ್ಕೆ ತರುವಂತೆ ಮನವಿಯಲ್ಲಿ ಕೋರಲಾಗಿದೆ.


ಕೊಪ್ಪಳ ತಾಲೂಕು ಅನುದಾನರಹಿತ ಶಾಲಾ ಆಡಳಿತ ಮಂಡಳಿಗಳ ಒಕ್ಕೂಟದ ಅಧ್ಯಕ್ಷ ಶಾಹೀದ್ ತಹಶೀಲ್ದಾರ ಕವಲೂರು, ಕಾರ್ಯದರ್ಶಿ ನಾಗರಾಜ ಗುಡಿ, ಸಹ ಕಾರ್ಯದರ್ಶಿ ಸಂದೇಶ ಪಟ್ಟಣಶೆಟ್ಟಿ, ಶಿವನಗೌಡ ಪ್ರೋ.ಪಾ. ವೀರಣ್ಣ ಕಂಬಳಿ, ಶಿವಾನಂದ ಎಲ್ಲಮ್ಮನವರ್, ಫಕೀರಪ್ಪ ಎಮ್ಮಿಯವರ, ಮಲ್ಲಿಕಾರ್ಜುನ ಎಸ್.ಎಚ್. ವಿಜಯ, ರಾಘವೇಂದ್ರ ಸೇರಿದಂತೆ ಇತರ ಪದಾಧಿಕಾರಿಗಳು, ಸದಸ್ಯರು ಉಪಸ್ಥಿತರಿದ್ದರು.

## ಆರೆಸ್ಸೆಸ್ ಕುರಿತು ಎಚ್‌ಡಿಕೆ ಹೇಳಿಕೆ ವೈಯಕ್ತಿಕ

**ಕೊಪ್ಪಳ:** ಆರ್‌ಎಸ್‌ಎಸ್ ಕುರಿತು ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ನೀಡುತ್ತಿರುವ ಹೇಳಿಕೆ ಅವರ ವೈಯಕ್ತಿಕ ಹೇಳಿಕೆಯಾಗಿದೆ. ಹೀಗಾಗಿ, ನಾನು ಈ ವಿಚಾರದ ಕುರಿತು ಪ್ರತಿಕ್ರಿಯಿಸುವುದಿಲ್ಲ ಎಂದು ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ಕೊಪ್ಪಳ ವಿಧಾನಸಭಾ ಕ್ಷೇತ್ರದ ಜೆಡಿಎಸ್ ನಿಯೋಜಿತ ಅಭ್ಯರ್ಥಿ ವೀರೇಶ ಮಹಾಂತಯ್ಯನಮಠ ಅವರ ನಿವಾಸದಲ್ಲಿ ಭಾನುವಾರ ಸನ್ಮಾನ ಸ್ವೀಕಾರ ಮಾಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದರು. ನಾನು ಆರ್‌ಎಸ್‌ಎಸ್‌ನವರು ಹೇಳುವುದೆಲ್ಲ ಮತ್ತು ಮಾಡುವುದೆಲ್ಲ ತಪ್ಪು ಎಂದು ಹೇಳುವುದಿಲ್ಲ, ಕೆಲವೊಂದು ಬಾರಿ ಅವರು ಹೇಳುವುದು ಸರಿ ಇರುತ್ತದೆ. ಹೀಗಾಗಿ, ಏಕಮುಖವಾಗಿ ನಾನು ಟೀಕೆ ಮಾಡುವುದಿಲ್ಲ ಎಂದರು.

ಇಂದಿನ ರಾಜಕಾರಣದ ಕುರಿತು ಮಾತನಾಡುವುದೇ ತಪ್ಪು. ಹಿಂದಿನ ರಾಜಕಾರಣಕ್ಕೂ ಈಗಿನ ರಾಜಕಾರಣಕ್ಕೂ ಬಹಳ ವ್ಯತ್ಯಾಸವಿದೆ. ನಮ್ಮತನವನ್ನೇ ಮರೆತಿರುವ ನಾವು ಕೇವಲ ಟೀಕೆ ಮಾಡುವುದರಲ್ಲಿಯೇ ಕಾಲಕಳೆಯುತ್ತೇವೆ. ಜನರ ವಿಶ್ವಾಸ ಗಳಿಸಲು ಕೆಲಸ ಮಾಡುವುದಿಲ್ಲ, ಬದಲಾಗಿ ವಿವಾದಾತ್ಮಕ ಹೇಳಿಕೆ ನೀಡುವ ಮೂಲಕ, ಮಿತಿಮೀರಿ ಟೀಕೆ ಮಾಡುವ ಮೂಲಕ ಜನರ ಮನಸ್ಸಿನಲ್ಲಿ ಉಳಿಯುವ ಯತ್ನ ಮಾಡುತ್ತಾರೆ. ಆದರೆ, ಇದು ಸರಿಯಾದ ದಾರಿಯಲ್ಲ, ನಾವು ಮಾಡುವ ಕೆಲಸದ ಮೂಲಕ ಜನರ ವಿಶ್ವಾಸ ಗಳಿಸಬೇಕು. ವಿಪಕ್ಷ ನಾಯಕರ ಸ್ಥಾನ ಮತ್ತು ಮುಖ್ಯಮಂತ್ರಿ ಸ್ಥಾನ ಒಂದು ನಾಣ್ಯದ ಎರಡು ಮುಖಗಳು ಇದ್ದಂತೆ. ಸರಿಯಾದ ದಿಕ್ಕಿನಲ್ಲಿ ಆಡಳಿತ ನಡೆಯಲು ಎರಡು ಮುಖಗಳು ಬೇಕಾಗುತ್ತವೆ. ಹೀಗಾಗಿ ಯಾವುದನ್ನು ಹಗುರವಾಗಿ ಪರಿಗಣಿಸಬಾರದು ಮತ್ತು ವಿಚಾರ ಮಾಡಿ ಮಾತನಾಡಬೇಕು ಎಂದರು.



ಕೊಪ್ಪಳ ವಿಧಾನಸಭಾ ಕ್ಷೇತ್ರದ ಜೆಡಿಎಸ್ ನಿಯೋಜಿತ ಅಭ್ಯರ್ಥಿ ವೀರೇಶ ಮಹಾಂತಯ್ಯನಮಠ ಅವರ ನಿವಾಸದಲ್ಲಿ ವಿಪ ಸಭಾಪತಿ ಬಸವರಾಜ ಹೊರಟ್ಟಿ ಅವರನ್ನು ಸನ್ಮಾನಿಸಲಾಯಿತು.

**ಶಾಲೆ ಆರಂಭಿಸಲಿ:** ಸರ್ಕಾರ ಮೊದಲು ಶಾಲೆಗಳನ್ನು ಪ್ರಾರಂಭಿಸಬೇಕು. ಮಕ್ಕಳು ಶಾಲೆಯನ್ನೇ ಮರೆತಿರುವುದರಿಂದ ಅವರನ್ನು ಆ ದಾರಿಗೆ ತರುವುದು ಸವಾಲಿನ ಕೆಲಸವಾಗಿದೆ. ಹೀಗಾಗಿ, ಕೂಡಲೇ ಎಲ್ಲ ಹಂತದ ಶಾಲೆಗಳನ್ನು ತೆರೆಯಬೇಕು. ಕೋವಿಡ್ ಸಂಕಷ್ಟದಿಂದಾಗಲೇ ಸರ್ಕಾರಿ ಶಾಲೆಯಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಳವಾಗಿರುವ ಮಾಹಿತಿ ಲಭ್ಯವಾಗಿದೆ. ಹೀಗಾಗಿ, ಸರ್ಕಾರ ಕೂಡಲೇ ಶಿಕ್ಷಕರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಬೇಕು. ಶಿಕ್ಷಕರ ನೇಮಕಾತಿ ನಿಯಮಗಳನ್ನು ಸರಳೀಕರಿಸಬೇಕು. ಎನ್‌ಇಪಿಯನ್ನು ಸಾರಾಸಗಟಾಗಿ ತಿರಸ್ಕಾರ ಮಾಡುವುದಿಲ್ಲ, ಅದರಲ್ಲಿ ಒಳ್ಳೆಯ ಅಂಶಗಳು ಇವೆ. ನರ್ಸರಿಯಲ್ಲಿ ಬಂದಿಷ್ಟು ಮಾರ್ಪಾಡು ಮಾಡಬೇಕಾಗಿದೆ. ಆದರೆ, ಜಾರಿ ಮಾಡುವ ಮುನ್ನ ಪಾಲಕರು, ಸಾರ್ವಜನಿಕರನ್ನೊಳಗೊಂಡು ಚರ್ಚೆ ಮಾಡಿ, ಅಗತ್ಯವಾಗಿರುವ ಮಾರ್ಪಾಡು ಮಾಡಿಕೊಂಡರೆ ಚೆನ್ನಾಗಿರುತ್ತಿತ್ತು. ಆದರೆ, ಇಂಥ ನೀತಿಯನ್ನು ಜಾರಿ ಮಾಡುವ ವೇಳೆಯಲ್ಲಿ ಅವಸರ ಮಾಡುವುದು ಒಳ್ಳೆಯದಲ್ಲ ಎಂದರು.

ವೀರೇಶ ಮಹಾಂತಯ್ಯನಮಠ ಇದ್ದರು.

# ಆರೆಸ್ಸೆಸ್‌ನವರು ಮಾಡುವುದೆಲ್ಲಾ ತಪ್ಪು ಅಂತ ಹೇಳುವುದಿಲ್ಲ: ಹೊರಟ್ಟಿ

## ಎಚ್‌ಡಿಕೆ ಹೇಳಿಕೆ ವೈಯಕ್ತಿಕ | ವಿಚಾರ ಮಾಡಿ ಮಾತಾಡ್ಬೇಕು

• **ಕನ್ನಡಪ್ರಭ ವಾರ್ತೆ** ಕೊಪ್ಪಳ

ಆರ್‌ಎಸ್‌ಎಸ್ ಕುರಿತು ಮಾಜಿ ಮುಖ್ಯಮಂತ್ರಿ, ಎಚ್.ಡಿ. ಕುಮಾರಸ್ವಾಮಿ ನೀಡುತ್ತಿರುವುದು ಅವರ ವೈಯಕ್ತಿಕ ಹೇಳಿಕೆ. ಹೀಗಾಗಿ, ನಾನು ಈ ವಿಚಾರದ ಕುರಿತು ಪ್ರತಿಕ್ರಿಯಿಸುವುದಿಲ್ಲ ಎಂದು ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದ್ದಾರೆ.



ಕೊಪ್ಪಳದಲ್ಲಿ ಭಾನುವಾರ ಸುದ್ದಿಗಾರರೊಂದಿಗೆ ಮಾತನಾಡಿ, ನಾನು ಆರ್‌ಎಸ್‌ಎಸ್‌ನವರು ಹೇಳುವುದೆಲ್ಲ ಮತ್ತು ಮಾಡುವುದೆಲ್ಲ ತಪ್ಪು ಎಂದು ಹೇಳುವುದಿಲ್ಲ. ಕೆಲವೊಂದು ಬಾರಿ ಅವರು ಹೇಳುವುದು ಸರಿ ಇರುತ್ತದೆ. ಹೀಗಾಗಿ, ಏಕಮುಖವಾಗಿ ನಾನು ಟೀಕೆ ಮಾಡುವುದಿಲ್ಲ ಎಂದರು.

ಇಂದಿನ ರಾಜಕಾರಣದ ಕುರಿತು ಮಾತನಾಡುವುದೇ ತಪ್ಪು. ಹಿಂದಿನ ರಾಜಕಾರಣಕ್ಕೂ ಈಗಿನ ರಾಜಕಾರಣಕ್ಕೂ ಬಹಳ ವ್ಯತ್ಯಾಸವಿದೆ. ನಮ್ಮತನವನ್ನೇ ಮರೆತಿರುವ ನಾವು ಕೇವಲ ಟೀಕೆ ಮಾಡುವುದರಲ್ಲೇ ಕಾಲಕಳೆಯುತ್ತೇವೆ. ವಿಪರೀತ ಟೀಕೆ ಮಾಡುವ ಮೂಲಕ ಜನರ ಮನಸ್ಸಿನಲ್ಲಿ ಉಳಿಯುವ ಯತ್ನ ಮಾಡುತ್ತೇವೆ. ಆದರೆ, ಇದು ಸರಿಯಾದ ದಾರಿಯಲ್ಲ. ವಿಪಕ್ಷ ನಾಯಕರ ಸ್ಥಾನ ಮತ್ತು ಸಿಎಂ ಸ್ಥಾನ ಒಂದೇ ನಾಣ್ಯದ ಎರಡು ಮುಖಗಳು ಇದ್ದಂತೆ. ಸರಿಯಾದ ದಿಕ್ಕಿನಲ್ಲಿ ಆಡಳಿತ ನಡೆಯಲು ಈ ಎರಡು ಮುಖಗಳೂ ಬೇಕಾಗುತ್ತವೆ. ಹೀಗಾಗಿ ಯಾವುದನ್ನೂ ಹಗುರವಾಗಿ ಪರಿಗಣಿಸಬಾರದು ಮತ್ತು ವಿಚಾರ ಮಾಡಿ ಮಾತನಾಡಬೇಕು ಎಂದು ಹೇಳಿದರು.